ಕರ್ನಾಟಕ ಸರ್ಕಾರ

**ಸಂಖ್ಯೆ:** ಡಿಟಿಇ 238 ಡಿಪಿಪಿ(2) 2012

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ:22-06-2013.

**ಇವರಿಗೆ,**

Principals of 14 Polytechnics
Who have applied for New Course/
Enhancement of Intake.(list enclosed)

ಮಾನ್ಯರೆ,

ವಿಷಯ: ವಿವಿಧ ಖಾಸಗಿ ಪಾಲಿಟೆಕ್ನಿಕ್/~~ಇಂಜಿನಿಯರಿಂಗ್~~ ಸಂಸ್ಥೆಗಳಿಗೆ 2013-14ನೇ ಸಾಲಿನಲ್ಲಿ 2ನೇ ಪಾಳಿಯದಲ್ಲಿ ಹೊಸ ಕೋರ್ಸುಗಳನ್ನು ಪ್ರಾರಂಭಿಸಲು ಹಾಗೂ ಹಾಲಿ ಇರುವ ಪ್ರವೇಶಾತಿ ಸಂಖ್ಯೆಯನ್ನು ಹೆಚ್ಚಿಸಲು ರಾಜ್ಯ ಸರ್ಕಾರದ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಪತ್ರ ಸಂಖ್ಯೆ: ಇಡಿ 135 ಟಿಪಿಇ 2013, ದಿ:21/6/2013.

-0-

2013-14ನೇ ಸಾಲಿಗೆ ಸಂಬಂಧಿಸಿದಂತೆ ನಿಮ್ಮ ಪಾಲಿಟೆಕ್ನಿಕ್‌ನಲ್ಲಿ ಹೊಸ ಕೋರ್ಸ್ ಪ್ರಾರಂಭಿಕೆಗೆ ಹಾಗೂ ಪ್ರವೇಶಾತಿ ಹೆಚ್ಚಳಕ್ಕಾಗಿ ರಾಜ್ಯ ಸರ್ಕಾರದ ಮಾನ್ಯತೆಯನ್ನು ಪಡೆಯಲು ಪ್ರಸ್ತಾವನೆಯನ್ನು ಕಳುಹಿಸಲಾಗಿತ್ತು. ಉಲ್ಲೇಖ(1)ರಲ್ಲಿ ನಮೂದಿಸಿರುವ ಸರ್ಕಾರದ ಪತ್ರ ದಿನಾಂಕ: 21/6/2013 ರಲ್ಲಿ, ನಿಮ್ಮ ಪಾಲಿಟೆಕ್ನಿಕ್ ಸಂಸ್ಥೆಯು ಹೊಂದಿರುವ ಕಟ್ಟಡ ಸೌಲಭ್ಯಗಳ ವಿವರಗಳನ್ನು ಅಂತರ್ಜಾಲದಲ್ಲಿ ಸೇರ್ಪಡೆಗೊಳಿಸಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿಯನ್ನು ನೀಡಬೇಕಾಗಿರುತ್ತದೆ. ಆದ್ದರಿಂದ ನಿಮ್ಮ ಪಾಲಿಟೆಕ್ನಿಕ್‌ನ ಭೂಮಿ ಮತ್ತು ಕಟ್ಟಡದ ವಿವರಗಳನ್ನು ಕೂಡಲೇ ಅಂತರ್ಜಾಲದಲ್ಲಿ ಅಪ್‌ಲೋಡ್ ಮಾಡಿ, 02 ಸೆಟ್ ದೃಢೀಕೃತ ಪ್ರತಿಗಳನ್ನು 03 ದಿನಗಳೊಳಗಾಗಿ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಜಂಟಿ ನಿರ್ದೇಶಕರು (ಎಟಿಎಸ್) ಇವರಿಗೆ ಖುದ್ದಾಗಿ ಸಲ್ಲಿಸಬೇಕಾಗಿ ತಿಳಿಸಲಾಗಿದೆ.

ಸದರಿ ಮಾಹಿತಿಯು ತುರ್ತಾಗಿ ಸರ್ಕಾರಕ್ಕೆ ಕಳುಹಿಸಬೇಕಾಗಿರುವುದರಿಂದ ಈ ದಿಸೆಯಲ್ಲಿ ಯಾವುದೇ ರೀತಿ ವಿಳಂಬ ಸಲ್ಲದು.

ತಮ್ಮ ವಿಶ್ವಾಸಿ,

ಜಂಟಿ ನಿರ್ದೇಶಕರು (ಎಟಿಎಸ್)
22/6/2013

ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ನಿರ್ದೇಶನಾಲಯದ ಈ-ಗವರ್ನೆನ್ಸ್ ಸೆಲ್‌ಗೆ.